**ವಿಜಾಪುರ ಜಿಲ್ಲೆಯಲ್ಲಿ ಬಸ್ಸುಗಳು ಸಮಯಕ್ಕೆ ಸರಿಯಾಗಿ ಓಡದಿರುವ ಬಗ್ಗೆ**

790 - ಶ್ರೀ ಬಸನಗೌಡ ಪಾಟೀಲ್ (ವಿಜಾಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ವಿಜಾಪುರ ಜಿಲ್ಲೆಯಲ್ಲಿ ಮತ್ತು ನಗರ ಪ್ರದೇಶಗಳಲ್ಲಿ ಓಡಾಡುವ ಬಸ್ಸುಗಳು ಸಮಯಕ್ಕೆ ಸರಿಯಾಗಿ ಓಡಾಡುವುದಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೆ?*

*ಆ) ಹಾಗಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು?*

ಶ್ರೀ ಕೆ.ಎಸ್. ಬೀಳಗಿ (ಸಾರಿಗೆ ಮಂತ್ರಿಗಳು) :

ಅ) ಸಾರಿಗೆಗಳ ಅನಿಯಮಿತ ಕಾರ್ಯಾಚರಣೆಯ ಬಗ್ಗೆ ಕೆಲವು ದೂರುಗಳು ಬಂದಿರುತ್ತದೆ.

ಆ) ಸಾರಿಗೆಗಳ ನಿಯಮಿತವನ್ನು ಉತ್ತಮಪಡಿಸಲು ಕ್ರಮ ಕೈಗೊಳ್ಳಲಾಗಿದೆ.

**ಅಸಂಘಟಿತ ಕಾರ್ಮಿಕರ ಅನುಕೂಲಕರ ಯೋಜನೆಯ ಬಗ್ಗೆ**

2406 - ಶ್ರೀ ಬಸನಗೌಡ ಪಾಟೀಲ್ (ವಿಜಾಪುರ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ರಾಜ್ಯದಲ್ಲಿ ಅಸಂಘಟಿತ ಕಾರ್ಮಿಕರ ಅನುಕೂಲಕರ ಯೋಜನೆಗಳಾವುವು?*

*ಆ) ನಿವೇಶನ ರಹಿತ ಅಸಂಘಟಿತ ಕಾರ್ಮಿಕರಿಗೆ ಮನೆಗಳನ್ನು ಕಟ್ಟಿಸಿ ಕೊಡಲು ಸರ್ಕಾರದ ಯೋಜನೆಗಳೇನು?*

ಶ್ರೀ ಸಿ. ಗುರುನಾಥ್ (ಕಾರ್ಮಿಕ ಸಚಿವರು) :

ಅ) ರಾಜ್ಯದಲ್ಲಿ ಕಾರ್ಮಿಕ ಇಲಾಖೆಯ ಮೂಲಕ ಜಾರಿಗೊಳ್ಳುವ ಅಸಂಘಟಿತ ಕಾರ್ಮಿಕರ ಅನುಕೂಲಕರ ಯೋಜನೆಗಳು ಯಾವುದು ಇರುವುದಿಲ್ಲ.

ಆ) ಈ ಬಗ್ಗೆ ರಾಜ್ಯ ಸರ್ಕಾರದ ಯೋಜನೆಗಳು ಯಾವುದೂ ಇರುವುದಿಲ್ಲ.

**ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅವ್ಯವಹಾರಗಳು**

2133 - ಶ್ರೀ ಜಿ. ಚಂದ್ರಣ್ಣ (ದೇವನಹಳ್ಳಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

*ಅ) ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಲ್ಲಿ ಎರಡು ಗುಂಪುಗಳ ನಡುವೆ ಒಳಜಗಳ ಹಾಗೂ ಸಂಘರ್ಷಣೆಯಿಂದ ಸಂಘದ ವ್ಯವಹಾರಗಳು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

*ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?*

*ಇ) ಸಂಘದಲ್ಲಿ ಲಕ್ಷಾಂತರ ರೂ.ಗಳ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

*ಈ) ಈ ಬಗ್ಗೆ ಸಂಘಗಳ ಜಿಲ್ಲಾ ನೋಂದಣಾಧಿಕಾರಿಗಳು ಸರ್ಕಾರಕ್ಕೆ ವರದಿ ಸಲ್ಲಿಸಿರುವುದು ನಿಜವೆ. ಹಾಗಿದ್ದಲ್ಲಿ ಕ್ರಮ ಕೈಗೊಳ್ಳಲು ಸರ್ಕಾರದ ವಿಳಂಬಕ್ಕೆ ಕಾರಣಗಳೇನು?*

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :

ಅ) ಎರಡು ಗುಂಪುಗಳ ನಡುವೆ ಒಳಜಗಳ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.